ಮಾಡದೇ ಇರುವುದರಿಂದ ಪರವಾನಗಿ ಮಂಜೂರು ಮಾಡುವುದು ಬಾಕಿ ಇರುತ್ತದೆ.

ಹೂಗಾರ, ಜೀರ, ಗುರುವ ಜಾರಿ ಜನಾಂಗದವರ ಅಭಿವೃದ್ಧಿ

3815(4610); ಶ್ರೀ ಭೂಸನೂರ ರಮೇಶ್ ಬಾಳಪ್ಪ

ಅ) ರಾಜ್ಯದಲ್ಲಿ ಹೂಗಾರ, ಜೀರ, ಗುರುವ ಜಾತಿಯ ಜನಾಂಗದವರು ಪಾರಂಪರಿಕವಾಗಿ ಅತ್ಯಂತ ಪಾವಿತ್ರ್ಯತೆಯ ಹೂವು ಮಾಲೆ ಕಟ್ಟುವ ಕೆಲಸವನ್ನು ಮಾಡುತ್ತಿದ್ದು, ಅವರು ಆರ್ಥಿಕವಾಗಿ ಬಹಳ ಹಿಂದುಳಿದಿದ್ದಾರೆ. ಅದಕ್ಕಾಗಿ ಆ ಜನಾಂಗದ ಆರ್ಥಿಕ ಬೆಳವಣಿಗೆಗಾಗಿ ಪ್ರಭಲವಾಗಲು ಪ್ರತ್ಯೇಕ ನಿಗಮ ಸ್ಥಾಪಿಸಲು ಅಥವಾ ಅವರ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರಗಳನ್ನು ಒದಗಿಸುವುದು)

ಆ) ಹಾಗಿದ್ದಲ್ಲಿ, ಯಾವಾಗ ಮಾಡಲಾಗುವುದು; (ವಿವರಗಳನ್ನೊದಗಿಸುವುದು)?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಔಷಧಿಗಳ ಕೊರತೆ ಇರುವುದು

3817(4426); ಶ್ರೀ ಡಾ॥ ರಫೀಕ್ ಅಹ್ಮದ್ ಎಸ್ (ತುಮಕೂರು ನಗರ)

ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಕೊರತೆ ನೀಗಿಸಲು ಕೈಗೊಂಡಿರುವ ಕ್ರಮಗಳೇನು;

ಆ) ಔಷಧಿಗಳ ಕೊರತೆಯಿರುವುದಕ್ಕೆ ಕಾರಣಗಳೇನು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸರ್ಕಾರಿ ಆಸ್ಪತ್ರೆಗಳಲ್ಲಿನ ಅನುದಾನಕ್ಕೆ ತಕ್ಕಂತೆ ಔಷಧಿಗಳನ್ನು ಟೆಂಡರ್ ಮೂಲಕ ಖರೀದಿಸಿ, ಅವರವರ ಬೇಡಿಕೆಗನುಸಾರವಾಗಿ ಜಿಲ್ಲಾ ಔಷಧ ಉಗ್ರಾಣಗಳ ಮೂಲಕ ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿಗಳನ್ನು ಪೂರೈಸುತ್ತಿರುವುದರಿಂದ ಔಷಧಿಗಳ ಕೊರತೆಯುಂಟಾಗುವ ಸಂಭವವಿರುವುದಿಲ್ಲ.

ಸರ್ಕಾರಿ ಆಸ್ಪತ್ರೆಗಳ ವಾರ್ಷಿಕ ಬೇಡಿಕೆಗನುಸಾರವಾಗಿ ಔಷಧಿಗಳನ್ನು ಪೂರೈಸಲಾಗುತ್ತಿದ್ದು, ಔಷಧಗಳ ಕೊರತೆ ಕಂಡು ಬಂದಿರುವುದಿಲ್ಲ. ಒಂದು ವೇಳೆ ಔಷಧಿಗಳ ಕೊರತೆಯುಂಟಾದಲ್ಲಿ, ಹೆಚ್ಚುವರಿಯಾಗಿ ಔಷಧಿಗಳನ್ನು ಪೂರೈಸಲು ಕ್ರಮ ಜರುಗಿಸಲಾಗುತ್ತದೆ.

ಆ) ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸರ್ಕಾರಿ ಆಸ್ಪತ್ರೆಗಳಲ್ಲಿನ ಅನುದಾನಕ್ಕೆ ತಕ್ಕಂತೆ ಔಷಧಿಗಳನ್ನು ಟೆಂಡರ್ ಮೂಲಕ ಖರೀದಿಸಿ, ಅವರವರ ಬೇಡಿಕೆಗನುಸಾರವಾಗಿ ಜಿಲ್ಲಾ ಔಷಧ ಉಗ್ರಾಣಗಳ ಔಷಧಿಗಳನ್ನು ಪೂರೈಸುತ್ತಿರುವುದರಿಂದ ಔಷಧಿಗಳ ಕೊರತೆಯುಂಟಾಗುವ ಸಂಭವವಿರುವುದಿಲ್ಲ.

ವೈದ್ಯರು ಮತ್ತು ಸಿಬ್ಬಂದಿ ಕೊರತೆ

3818(4536); ಶ್ರೀ ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು ನಗರ)

ಅ) ತುಮಕೂರು ಜಿಲ್ಲಾ ಆಸ್ಪತ್ರೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರದ ಹಾಗೂ ಇತರೆ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಕೊರತೆಯನ್ನು ನೀಗಿಸಲು ಕೈಗೊಂಡ ಕ್ರಮಗಳೇನು?

ಇ) ಖಾಲಿ ಇರುವ ವೈದ್ಯರು ಮತ್ತು ಸಿಬ್ಬಂದಿಗಳನ್ನು ಯಾವಾಗ ಭರ್ತಿ ಮಾಡಲಾಗುವುದು?